ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

1889ನೇ ಇಸವಿ ಅರ್ಜೀ ನಂಬರ್ 45.

ಮೃತಪಟ್ಟ ಪುಟ್ಟೇಗವ್ವಡರ ಆಸ್ತೀ ವಿಷಯದಲ್ಲಿ—

ಅರ್ಜೀದಾರು, ಚವ್ವಡೆಸವ್ವಡರು, ಮೃತಪಟ್ಟ ಸದರೀ ಪುಟ್ಟೇಗವ್ವಡರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮಳವಳ್ಳಿ ಕಸಬೆ ಸ್ಥಳದ ಸದರೀ ಚವ್ವಡೆಗವ್ವಡರು ಸದರೀ ವಾಸಸ್ಥರಾಗಿ ಮೃತಪಟ್ಟ ಪುಟ್ಟೇಗವ್ವಡರ ಜಿಂದಗಿ ಟಗ್ಯಾಗಿ ಬರತಕ್ಕ 800 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಚವ್ವಡೆಗವ್ವಡರ ಅರ್ಜೀಯನ್ನು 1889ನೇ ಇಸವಿ ಮಾರ್ಚಿ ತಿಂಗಳು ತಾರೀಖು 29ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪುಟ್ಟೇಗವ್ವಡರ ಆಸ್ತಿಗೆ ಹಕ್ಕುದಾರರಾದ ವಿಸಪ್ಟ್ರರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯ ಪಡಿಸಿ ಇಧೆ.

1889ನೇ ಇಸವಿ ಫಿಬ್ರುವರಿ ತಿಂಗಳು 27ನೇ ತಾರೀಖಿನಲ್ಲಿ ಕೋರ್ಟುವೊಹರ್ ಮತ್ತು ನನ್ನ ದಸ್ತಖತ್ತೊಡನೆ ಕೊಡೋಣಾಗಿಧೆ.

1889ನೇ ಇಸವಿ ಅರ್ಜೀ ನಂಬರ್ 51.

ಮೃತಪಟ್ಟ ಸಾಹುಕಾರ ಸೈದ್ ರಸೂಲ್‌ಸಾಬರ ಆಸ್ತೀ ವಿಷಯದಲ್ಲಿ—

ಅರ್ಜೀದಾರು, ಖಾತುನಾಬಿಯು, ಮೃತಪಟ್ಟ ಸದರೀ ಸೈದ್ ರಸೂಲ್ ಸಾಬರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಶ್ರೀರಂಗಪಟ್ಟಣ ತಾ|| ಹಿರೋಡೆ ಸ್ಥಳದ ಸದರೀ ಖಾತುನಾಬಿ ಸದರೀ ವಾಸಸ್ಥರಾಗಿ ಮೃತಪಟ್ಟ ಸೈದ್ ರಸೂಲ್‌ಸಾಬರ ಜಿಂದಗಿ ಬ್ಯಾಗ್ಯಾಗಿ ಬರತಕ್ಕ 4506 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಖಾತುನಾಬಿಯ ಅರ್ಜಿಯನ್ನು 1889ನೇ ಇಸವಿ ಮಾರ್ಚಿ ತಿಂಗಳು ತಾರೀಖು 29ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸೈದ್ ರಸೂಲ್ ಸಾಬರ ಆಸ್ತಿಗೆ ಹಕ್ಕುದಾರರಾದ ವಿಪ್ಟ್ರರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1889ನೇ ಇಸವಿ ಮಾರ್ಚಿ ತಿಂಗಳು 8ನೇ ತಾರೀಖಿನಲ್ಲಿ ಕೋರ್ಟುವೊಹರ್ ಮತ್ತು ನನ್ನ ದಸ್ತಖತ್ತೊಡನೆ ಕೊಡೋಣಾಗಿಧೆ.

ಎಸ್. ಹೇನುಜಿರಾವ್, ಡಿಸ್ಟ್ರಿಕ್ಟ್ ಜಡ್ಜ.

ಹಾಸನ ಡಿಸ್ಟ್ರಿಕ್ಟ್.

ತಾರೀಖು 16ನೇ ಫಿಬ್ರುವರಿ 1889.

ಯಿದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಮೈಸೂರು ಮೆ|| ದಿರ್ವಾನಾಹೆಬರವರ ಹುಕುಂ ಬಮೋಜಿಬ್ ಹಾಸನ ಡಿಸ್ಟ್ರಿಕ್ಟಿನ ಪೈಕಿ ಮಂಜಿರಾಬಾದು ತಾಲ್ಲೂಕಿಲ್ಲಿ ಇರುವ ಮೂರನಹಳ್ಳಿ ಛಾವಿಯಲ್ಲಿ ಟೋಲ್‌ಗೇಪ್ ಯೆಂಬ ಸುಂಕದ ಕಟೆ ವಳಗೆ ಸ್ ೧೮೮೯ನೇ ಇಸವಿ ಏಪ್ರೆಲ್ ಮಾಹೆ 1ನೇ ಮರ್ಕುಂ ಲಾಗಾಯತು 1890ನೇ ಇಸವಿ ಮಾರ್ಚಿ 31ರವರಿಗೆ ಸುಂಕ ವಸೂಲ್‌ಮಾಡುವ ಸ್ವಾತಂತ್ರ್ಯವು 1889ನೇ ಇಸವಿ ಮಾರ್ಚಿ ತಾ.೧೯ಖು 27ರಲ್ಲಿ ಸಕಲೇಶಪುರದ ಮೊಕ್ತಾಮಿನಲ್ಲಿ ತಾಲ್ಲೂಕು ಕಛ್ಚೆರಿವಳಗೆ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುತ್ತೆ.

2. ವಸೂಲೀ ಹಕ್ಕನ್ನ ಕೊಂಡುಕೊಳ್ಳುವ ಕಂಟ್ರ್ಯಾಕ್ಟುದಾರನು ಇದಕ್ಕೆ ಲಗತ್ತಾಗಿರುವ ಪೆಡ್ಯೂಲಿನಲ್ಲಿ ನಮೂದಾಗಿರುವ ದರಗಳ ಮೇರಿಗೇನೇ ಟೋಲ್ ವಸೂಲ್ಮಾಡಬೇಕು. ಮತ್ತು ಸ್ ೧೮೭೬ನೇ ಇಸವಿ ನವಂಬರ್4ನೇ ಮರ್ಕುಂ 274ನೇ ನಂಬರ್‌ವುಳ್ಳ ಲೇಟ್ ಚೀಫ್ ಕಮ್ಮಿಷ್ಟರ್ ಸಾಹೆಬರವರ ನೋಟಿಫಿಕೇಷನಿನಲ್ಲಿ ಛಾಯಿಷ್ಮಾಗಿರುವ ರೂಲ್ಸ್‌ಪ್ರಕಾರ ನಡಬುಕೊಳ್ಳಬೇಕು.

3. ಚಡದರಖಾಸ್ತನ್ನಾಗಲಿ ಯಾವ ದರಖಾಸ್ತನ್ನಾಗಲಿ ಅಂಗೀಕರಿಸುವದಕ್ಕೆ ಯಾ ತಿರಸ್ಕರಿಸುವದಕ್ಕೆ ಹಾರ್ಸ ಡಿಸ್ಟ್ರಿಕ್ಟು ಆಫಿಸರವರು ಅಧಿಕಾರ ವುಳಿಸಿಕೊಂಡಿರುತ್ತಾರೆ.

4. ಯಾವ ದರಖಾಸ್ತು ಅಂಗೀಕರಿಸಲ್ಪಡುತ್ತದೋ ಅವನು ಕೂಡ್ಲೆ ದರಖಾಸ್ತು ಮೊಬಲಗಿನಲ್ಲಿ 4ರಲ್ಲಿ ಬಂದು ಅಂಕ ಮೊಬಲಗನ್ನ ಅಡ್ವನಸಾಗಿ ತೇವಣಿಯಿಟ್ಟು ಬಾಕಿ ಮೊಬಲಗನ್ನ 1889ನೇ ಇಸವಿ ಏಪ್ರೆಲ್ 20ರ ಲಾಗಾಯತು ಸವಾನಾದ 6 ಖಿಸ್ತು ಗಳಾಗಿ ಪ್ರತಿ ತಿಂಗಳ 20ನೇ ತಾರೀಖಿಗೆ ಪಾವತಿ ಮಾಡಬೇಕು. ದರಖಾಸ್ತುದಾರನು ಪ್ರತಿ ಮಾಹೆವಾರಿ ಖಿಸ್ತು ಮೊಬಲಗನ್ನು ತಪ್ಪದೆ ಕೊಡುತ್ತಾ ಬರುವದಕ್ಕೆ ಲಾಯಖಾದ ಒಬ್ಬನನ್ನ ಜಾಮೀನ್ ಕೊಡಬೇಕು. ಸದರೀ ಜಾಮೀನ್ ದಸ್ತ್ಯೆವಜು ಕ್ರಮವಾಗಿ ರಿಜಿಸ್ಟರು ಮಾಡಿಸಿ ಹಾಜರ್ ಪಡಿಸಬೇಕು.

5. ತೇವಣಿ ಇಡದೇ ಇದ್ದರೆ ಅಥವಾ ಜಾಮೀನ್ ಕೊಡದೆ ಇದ್ದರೆ ದರಖಾಸ್ತುದಾರನಿಗೆ ನುಕಸಾನುಕರವಾಗಿ ಕಂಟ್ರ್ಯಾಕ್ಟು 2ನೇ ಹರಾಜ್‌ಮಾಡಲ್ಪಡುವದು ಖಿಸ್ತು ಪ್ರಕಾರ ಹಣ ಕೊಡುವದಕ್ಕೆ ತಪ್ಪಿದರೆ ಹಾಗೆ ಬಾಕಿಯಾದ ಮೊಬಲಗಿಗೆ ಪಾವತೀ ತಾರೀಖಿನ ವರಿಗೆ ತಿಂಗಳು ಒಂದಕ್ಕೆ ರೂಪಾಯಿ ಒಂದಕ್ಕೆ 1 ಕಾಸಿನಂತೆ ಬಡ್ಡಿ ವಸೂಲ್ಮಾಡಲ್ಪಡುವದು ಮತ್ತು ಜೆಪ್ಯುಟಿ ಕಮ್ಮಿಷನರವರು ತಮಗೆ ಯುಕ್ತ ತೋರುವ ಪ್ರಕಾರ ಅಥವಾ ಜಾಮೀನ್‌ದಾರನ ಅಪೇಕ್ಷೆ ಪ್ರಕಾರ ಕಂಟ್ರ್ಯಾಕ್ಟು 2ನೇ ಹರಾಜ್ ಮಾಡಲ್ಪಡುವದಕ್ಕೆ ಗುರಿಯಾಗತಕ್ಕದ್ದು, ಅವರಿಂದ ಯೇನಾದರೂ ನಷ್ಟಸಂಭವಿಸಿದರೆ ಆದು ಕಂಟ್ರ್ಯಾಕ್ಟುದಾರನಿಂದ ಅಥವಾ ಜಾಮೀನ್‌ದಾರನಿಂದ ಕಂದಾಯದ ಬಾಕಿಯಂತೆ ವಸೂಲ್ ಮಾಡಲ್ಪಡತಕ್ಕದ್ದು.

6. ದರಖಾಸ್ತು ಮೊಬಲಗು ತಿಮಾಯಿ 4 ಮತ್ತು 5ನೇ ಕಲಂನಲ್ಲಿ ನಮೂದಾಗುವ ಷರತ್ತಿಗೆ ಒಳಪಟ್ಟು ಖಜಾನೆಗೆ ಸಲಾಯಿಸುವ ಸದರೀ ಕಂಟ್ರಾಕ್ಟು ಮೊಬಲಗಿನ ರೂಪಾಯಿ 1ಕ್ಕೆ ಬಂದಾಸಯಂತೆ ಲೋಕಲ್‌ಸೆಸ್ ಕೊಡಲಿಕ್ಕೆ ಕಂಟ್ರಾಕ್ಟುದಾರನು ಬದ್ಧನಾಗಿ ಇರುತ್ತಾನೆ.

7. ಪ್ರತಿ ದಿನದ ಟೋಲ್ ವಸೂಲ್ ತೋರಿಸುವ ನಿಜವಾದ ಮತ್ತು ಕರಾರುವಾಕ್ಕಾದ ಲೆಕ್ಕವನ್ನ ಇಡಲು ಸಹ ಕಂಟ್ರಾಕ್ಟುದಾರನು ಬದ್ಧನಾಗಿರುವದಲ್ಲದೆ ಡಿಸ್ಟ್ರಿಕ್ಟುಮತ್ತು ತಾಲ್ಲೂಕು ಉದ್ಯೋಗಸ್ಥರ ಇನ್‌ಸ್ಪೆಕ್ಷನಿಗೆ ಲೆಕ್ಕ ವಳಗಾಗಿ ಇರತಕ್ಕದ್ದು.

8. ಕಂಟ್ರಾಕ್ಟುದಾರನು ಆಮದರಫ್ತಿನ ಲೆಕ್ಕ ಯಿಡಲೋಸ್ಕರ ಬೆಬ್ಬಂದಿ ಅಂದರೆ ಮುತ್ಸದ್ದಿ ಖರ್ಚನ್ನು ವಹಿಸಲು ಬದ್ಧನಾಗಿ ಇರತಕ್ಕದ್ದು.

9. ಗವರ್ನಮೆಂಟ್ ಟೋಲ್ ಮನೆ ಮತ್ತು ಗೇಟನ್ನು ಕಂಟ್ರಾಕ್ಟುದಾರನು ಉಪಯೋಗಿಸತಕ್ಕದ್ದು ಮತ್ತು ಅವುಗಳನ್ನ ಆತನು ಪೂರಾ ದುರಸ್ತಿನಲ್ಲಿ ಯಿಟ್ಟು ಕೊಂಡಿತರತಕ್ಕದ್ದು.

10. ಕಂಟ್ರಾಕ್ಟುದಾರನು ಪ್ರತಿ ತಿಂಗಳು ಗುರ್ಕೇ ತಾರೀಖಿನಲ್ಲಿ ಹಿಂದಣ ತಿಂಗಳ ಟೋಲ್ ವಸೂಲ್ ಲೆಕ್ಕವನ್ನ ಮಂಜರಾಬಾದ್ ತಾಲ್ಲೂಕು ಕಚ್ಚೇರಿಗೆ ಕಳುಹಿಸತಕ್ಕದ್ದು.

11. ದರಗಳ ಪಟ್ಟಿ ಈ ಕೆಳಗೆ ವಿವರ ಯಿದೆ.

		ರೂ.	ಆ.	ಪೈ.
1.	ಪ್ರತಿ ನಾಲ್ಕು ಚಕ್ರದ ಭಂಡಿಗೆ	2	0	0
2.	ಪ್ರತಿ ಎರಡು ಡಿಟೋ ..	1	0	0
3.	ಪ್ರತಿ ಯಕ್ಕಾ ಮೇಲೂ	0	4	0
4.	ಸ್ಪ್ರಿಂಗ್‌ಯಾನೇ ಬಿಲ್ಲಿನ ಮೇಲೆ ಇರುವ ಬಾಡಿಗೆ ಭಂಡಿ ಪ್ರತಿ 1ಕ್ಕೆ	0	2	0
5.	ಎಂಟೂ ಎತ್ತುಗಳಿಂದ, ಕೋಣಗಳಿಂದ, ಕುದರೆಗಳಿಂದ, ಟೂಕಣಗಳಿಂದ, ಕತ್ತೆಗಳಿಂದ ಯಾ ಹೇಸರಕತ್ತೆಗಳಿಂದ ಎಳೆಯಲ್ಪಟ್ಟು ಮತ್ತು ಬಿಲ್ಲಿನ ಮೇಲೆ ಇಲ್ಲದ ಪ್ರತಿಗಾಡಿ ವ ಬಾಡಿಗೆ ಭಂಡಿ ಒಂದಕ್ಕೆ ಭರ್ತಿಯಾಗಿ ಇದ್ದರೆ	1	8	0
6.	ಡಿಟೋ ಡಿಟೋ ಭರ್ತಿಯಿಲ್ಲದಿದ್ದರೆ	0	8	0
7.	ಆರುಯತ್ತುಗಳು ವಗೈರೇಗಳಿಂದ ಯಳೆಯಲ್ಪಟ್ಟು ಗಾಡಿ ವ ಬಾಡಿಗೆ ಭಂಡಿ ಒಂದಕ್ಕೆ ಭರ್ತಿಯಾಗಿದ್ದರೆ	0	12	0
8.	ಡಿಟೋ ಡಿಟೋ ಭರ್ತಿ ಯಿಲ್ಲದಿದ್ದರೆ	0	6	0
9.	ನಾಲ್ಕು ಯತ್ತುಗಳಿಂದ, ಕೋಣಗಳಿಂದ, ಕುದರೆಗಳಿಂದ, ಟೂಕಣಗಳಿಂದ, ಕತ್ತೆಗಳಿಂದ, ಹೇಸರಕತ್ತೆಗಳಿಂದ ಯಳೆಯಲ್ಪಟ್ಟ ಗಾಡಿ ಮತ್ತು ಬಾಡಿಗೆ ಭಂಡಿ ಒಂದಕ್ಕೆ ಭರ್ತಿಯಾಗಿ ಯಿದ್ದರೆ	0	8	0
10.	ಡಿಟೋ ಡಿಟೋ ಭರ್ತಿ ಯಿಲ್ಲದಿದ್ದರೆ	0	4	0
11.	ಯರಡು ಯತ್ತುಗಳಿಂದ, ಕೋಣಗಳಿಂದ, ಕುದರೆಗಳಿಂದ, ಟೂಕಣಗಳಿಂದ, ಕತ್ತೆಗಳಿಂದ, ಯಾ ಹೇಸರಕತ್ತೆಗಳಿಂದ, ಯಳೆಯಲ್ಪಟ್ಟ ಗಾಡಿ ಯಾ ಬಾಡಿಗೆ ಭಂಡಿ ಒಂದಕ್ಕೆ ಭರ್ತಿಯಾಗಿ ಇದ್ದರೆ	0	4	0
12.	ಡಿಟೋ ಡಿಟೋ ಭರ್ತಿ ಯಿಲ್ಲದಿದ್ದರೆ	0	2	0
13.	ಕೋಣಗಳು ಯಾ ಯತ್ತುಗಳು ರಾಸು 1ಕ್ಕೆ ಹೊರಸಲ್ಪಟ್ಟು ಯಿದ್ದರೆ. ..	0	1	0
14.	ಡಿಟೋ ಡಿಟೋ ಹೊರೆ ಯಿಲ್ಲದಿದ್ದರೆ	0	0	3
15.	ಪ್ರತಿ ಆನೆಗೂ	1	8	0
16.	ಪ್ರತಿ ವಂಟೆಗೂ ಹೊರೆ ಹೊರಿಸಲ್ಪಟ್ಟಿದ್ದರೆ	0	8	0
17.	ಡಿಟೋ ಡಿಟೋ ಹೊರೆ ಯಿಲ್ಲದಿದ್ದರೆ	0	4	0
18.	ಡಿಟೋ ಕುದರೆಗೂ ಹೊರೆ ಹೊರಿಸಲ್ಪಟ್ಟಿದ್ದರೆ ಯಾ ಸವಾರಿ ಮಾಡಲ್ಪಡುತಿದ್ದರೆ ..	0	1	6
19.	ಹೊರೆ ಯಿಲ್ಲದ ಯಾ ಹಿಡಿದುಕೊಂಡು ಹೋಗುವ ಪ್ರತಿ ಕುದುರೆಗೂ	0	0	9
20.	ಪ್ರತಿ ತಟ್ಟು ಯಾ ಹೇಸರಕತ್ತೆಗೂ ಹೊರೆ ಹೊರಿಸಲ್ಪಟ್ಟಿದ್ದರೆ ಯಾ ಸವಾರಿ ಮಾಡಲ್ಪಡುತಿದ್ದರೆ	0	0	9
21.	ಡಿಟೋ ಹೊರೆ ಯಿಲ್ಲದ ಯಾ ಹಿಡಿದುಕೊಂಡು ಹೋಗಲ್ಪಡುವದಕ್ಕೆ	0	0	6
22.	ಪ್ರತಿ ಕತ್ತೆಗೂ ಹೊರೆ ಹೊರಿಸಲ್ಪಟ್ಟು ಯಿದ್ದರೆ ಯಾ ಸವಾರಿ ಮಾಡಲ್ಪಡುತಿದ್ದರೆ ..	0	0	6
23.	ಹೊರೆ ಯಿಲ್ಲದ ಯಾ ಹಿಡಿದುಕೊಂಡು ಹೋಗಲ್ಪಡುವ ಪ್ರತಿ ಕತ್ತೆಗೂ ..	0	0	1
24.	ಪ್ರತಿ ಕುರಿ, ಮೇಕೆ ಯಾ ಹಂದಿಗೂ	0	0	1
25.	ಯಿಂಟು ಜೋಯಿಗಳೊಡನೆ ಪ್ರತಿ ಜೋಲಿ, ಪಾಲಕಿ ಯಾ ಟಾಂಜಾನಿಗೂ ..	1	0	0
26.	ಆರು ಜೋಯಿಗಳೊಡನೆ ಡಿಟೋ	0	12	0
27.	ನಾಲ್ಕು ಜೋಯಿಗಳೊಡನೆ ಡಿಟೋ	0	8	0
28.	ಯಿಬ್ಬರು ಜೋಯಿಗಳೊಡನೆ ಡಿಟೋ, ಡಿಟೋ	0	4	0

ನಡೆದು ಬರುವ ಪಾರ್ಟಿಸ್ಥರ ಮೇಲೆ ಟೋಲ್ ವಸೂಲ್ ಮಾಡತಕ್ಕದ್ದಲ್ಲ.

1889ನೇ ಇಸವಿ 21ನೇ ಫಿಬ್ರವರಿ.

ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಹಾಸನ ಡಿಸ್ಟ್ರಿಕ್ಟು ಹೊಳೇನರಸಿಹ್ಮಪುರ ತಾಲ್ಲೂಕಿನಲ್ಲಿನ ಕುರಂಗದ ಕಲ್ಲುಗಳನ್ನ ಜಪ್ತಾಯಿಸಿಕೊಳ್ಳತಕ್ಕ ಹಕ್ಕುದಾರಿಯು ಹೊಳೇನರಸಿಹ್ಮಪುರ ತಾಲ್ಲೂಕು ಕಚೇರಿಯಲ್ಲಿ ಸನ 1889ನೇ ಇಸವಿ ಮಾರ್ಚಿ ತಾರೀಖು 27ನೇ ದಿವಿ 11 ಘಂಟೆಗೆ ಪ್ರಾರಂಭಿಸಿ ಬಹಿರಂಗವಾಗಿ ಹರಾಜ್ ಮಾಡಲ್ಪಡುವದು.

2. ಅಮಲ್ದಾರ್ರು ಅಥವಾ ಕಿರಸ್ತೇದಾರ್ರು ಹರಾಜ್ ಮಾಡಿಸುವರು.

3. ಈ ಹರಾಜಿನ ಚಡದರಖಾಸ್ತು ಹಾಸನ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರವರಿಂದ ಮಂಜೂರು ಮಾಡಲ್ಪಡುವ ಪರಯತಂರ ಖಾಯಮಾದ್ದಾಗಿ ತಿಳಿದುಕೊಳ್ಳಕೂಡದು.

4. ಈ ಇಜಾರೆಯು ಸ॥ 1890ನೇ ಇಸವಿ ಮಾರ್ಚಿ 31ರ ವರಿಗೆ ಜಾರಿಯಲ್ಲಿರತಕ್ಕದ್ದು.

5. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಕೀಕಡಾ 25 ರೂಪಾಯಿ ಯಂತೆ ಆಗುವ ಮೊಬಲಗನ್ನ ಡಿಪಾಜಿಟ್ಟು ಇಡಬೇಕಲ್ಲದೆ ಹರಾಜ್ ಮಂಜೂರು ಮಾಡಲ್ಪಟ್ಟ ಸಂಗತಿ ಡೆಪ್ಯುಟಿ ಕಮ್ಮಿಷನರವರಿಂದ ಕ್ರಯದಾರನಿಗೆ ತಿಳಿಸಲ್ಪಟ್ಟ ತಾರೀಖು ಮೊದಲು 7 ದಿವಸದ ಒಳಗಾಗಿ ಕ್ರಯದ ಬಟ್ಟು ಮೊಬಲಗಿನ ಮೇಲೆ ರೂಪಾಯಿ ಬಂದಕ್ಕೆ ಒಂದಾಣೆಯಂತೆ ಆಗುವ ಲೋಕಲ್ ಸೆಸ್ ದೇಬೀಲ್ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ, ಹಾಂಗೆ ಡಿಪಾಜಿಟ್ ಇಟ್ಟ ಮೊಬಲಗು ಸರ್ಕಾರಕ್ಕೆ ಬಂಡವಾಗಿ ತೆಗದುಕೊಳ್ಳಲ್ಪಡುವದು, ಹಾಂಗೆ ಡಿಪಾಜಿಟ್ ಮೊಬಲಗು ಹಾಜರ್ಮಾಡದಿದ್ದರೂ ಅಥವಾ ಬಾಕಿ ಕ್ರಯದ ಮೊಬಲಗು ಪಾವತಿ ಮಾಡದಿದ್ದರೂ, ಹಕ್ಕುದಾರಿಯು ಅವಲ್ ಕ್ರಯದಾರನ ಖರ್ಚಿಗೂ ಮತ್ತು ಲುಕ್ಸಾನಿಗೂ ಳಪಟ್ಟು ಪುನಹ ವಿಕ್ರಯಿಸಲ್ಪಡುವದು.

6. ಹರಾಜಿನ ಷರತ್ತುಗಳು.

ಹಿಡುವಳಿ ಜಮೀನಿನಲ್ಲಿ ಇರತಕ್ಕ ಕಲ್ಲುಗಳನ್ನು ತೆಗದುಕೊಳ್ಳಬೇಕಾದರೆ ಹಿಡುವಳಿದಾರನ ಸಮ್ಮತಿಯನ್ನ ಪಡಿಯಬೇಕು. ಜಮೀನು ಹಿಡುವಳಿದಾರನು ತನ್ನ ಕಲ್ಲುಗಳನ್ನು ಸ್ವಂತ ಪ್ರಯೋಜನಕ್ಕಾಗಿ ತೆಗದುಕೊಳ್ಳಲೂ ಕೂಡದು ಇಜಾರೆದಾರನಿಗೆ ಮಾರಬೇಕೇ ಹೊರತು ಇತರ ಜನಗಳಿಗೆ ಮಾರಲೂಕೂಡದು.

(b) ಇಜಾರೆದಾರನು ಹುಲ್ಲುಬನ್ನಿ ಇಜಾರೆದಾರರ ಚರಾವು ಹಕ್ಕಿನಲ್ಲಿ ಪ್ರವೇಶಿಸಕೂಡದು.

(c) ಬಂಜರು ಜಮೀನುಗಳ ಸಾಗುವಳಿ ಬಗ್ಗೆ ದರಖಾಸ್ತು ಬಂದಲ್ಲಿ ಆ ಪ್ರಕಾರ ಸಾಗುವಳಿಗೆ ಕೊಟ್ಟು ಬಿಡುವದಕ್ಕೆ ಕುರಂಗವ ಇಜಾರೆದಾರನು ಅಡ್ಡಿ ಹೇಳಕೂಡದು. ಅಂಥಾ ಜಮೀನುಗಳಲ್ಲಿ ಕುರಂಗದ ಕಲ್ಲುಗಳನ್ನ ತೆಗದುಕೊಳ್ಳತಕ್ಕ ಹಕ್ಕು ಮಾತ್ರ ಇಜಾರೆದಾರನಿಗೆ ಉಳಿದಿರುತ್ತೆ.

(d) ಇಜಾರೆದಾರನು ಕಲ್ಲುಗಳಿಗೋಸ್ಕರ ಜರ್ಮೀಗಳನ್ನು ಅಗಿಯಕೂಡದು ಒಂದು ವೇಳೆ ಹಾಗೆ ಆಗದಲ್ಲಿ ಆ ಗುಂಡಿಗಳನ್ನ ತಕ್ಷಣ ಮುಚ್ಚಿ ಬಿಟ್ಟು ಸಾಗುವಳಿಗೆ ಜರ್ಮೀ ಲಾಯಕ್ಕಾ ಇರುವ ಹಾಗೆ ಮಾಡಬೇಕು.

ಹಾಸನ ಡಿಸ್ಟ್ರಿಕ್ಟು.

ಫಾರೆಸ್ಟ್ ಇಲಾಖೆ.

ತಾರೀಖು 5ನೇ ಮಾರ್ಚಿ 1889.

ಹಾಸನ ಡಿಸ್ಟ್ರಿಕ್ಟು ಮಂಜರಾಬಾದ್ ತಾಲ್ಲೂಕಿನಲ್ಲಿರತಕ್ಕ ಇದರಡಿ ಕಂಡ ಫಾಟ್ ಫಾರೆಸ್ಟುಗಳಲ್ಲಿ ವುತ್ಪತ್ತಿ ಆಗುವ ಇಲಾಚಿ ಮತ್ತು ಮೆಣಸನ್ನು ಗೇಣೀ ಮೂಲಕ ಹತ್ತು ವರುಷಗಳ ಕಾಲಕ್ಕೆ 1889—90ನೇ ಸರ್ಕಾರ ಸಾಲ್ ಲಾಗಾಯತು 1898—99ನೇ ಸರ್ಕಾರ ಸಾಲಿನ ವರಿಗೆ ಜಮಾಯಿಸುವ ಹಕ್ಕುದಾರಿ ಬಗ್ಗೆ ದರಖಾಸ್ತುಗಳು ಇದರ ದೆಸೆಯಿಂದ ಅಪೇಕ್ಷಿಸಲ್ಪಡುತವೆ.

1 ಬಿಸಲೆಘಾಟಿ ಫಾರೆಸ್ಟು.
2 ಕೆಂಪು ಹೊಳೆ ಮತ್ತು ಕೆಂಚನ ಕುಮರಿ ಫಾರೆಸ್ಟು.

2. ದರಖಾಸ್ತುಗಳು, "ಫಾಟಿಫಾರೆಸ್ಟುಗಳ ಯಿಲಾಚಿ ಮತ್ತು ಮೆಣಸಿನ ಗೇಣೀಗೋಸ್ಕರ ದರಖಾಸ್ತುಗಳು" ಯಂಬದಾಗಿ ಮೇಲ್‌ವಿಳಾಸ ಬರಿಯಲ್ಪಟ್ಟು ಹಾಸನದ ಮೊಕ್ಕಾಂ ಹಾಸನ ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರವರಿಗೆ 1889ನೇ ಮಾರ್ಚಿ 20ನೇ ಮಕ್ಕಾಂ ಯಾ ಅದಕ್ಕೆ ಮುಂಚಿತವಾಗಿ ತಲವುವಂತೆ ಕಳುಹಿಸಲ್ಪಡತಕ್ಕದ್ದು. ದರಖಾಸ್ತುಗಳು, 1889ನೇ ಇಸವಿ ಮಾರ್ಚಿ 20ನೇ ಮಕ್ಕಾಮಿನಲ್ಲಿ ಹಾಜರಿರಬಹುದಾದ ದರಖಾಸ್ತುದಾರರ ರೂಬರೂಬ್ ಡೆಪ್ಯುಟಿ ಕಮ್ಮಿಷನರವರ ಆಫಿಸಿನಲ್ಲಿ ಸದರೀಯವರಿಂದಲಾಗಲಿ ಅಥವಾ ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರಿಂದಲಾಗಲಿ ಆಫಿಸ್ ಹೊತ್ತಿನಲ್ಲಿ ಖುಲ್ಲಾ ಮಾಡಲ್ಪಡುವವು. ಸದರೀ ದರಖಾಸ್ತುಗಳ ಆಕ್ಷೇರು ವಿಲೇವಾರಿಯು ನ್ಯೆಸೂರ್ ದೇಶದ ಫಾರೆಸ್ಟ್ ವ ಪ್ಲಾಂಟೇಷ್ಣಗಳ ಇನಸ್ಪೆಕ್ಟರ್ ಜನರಲ್‌ಯವರಿಗೆ ಸೇರಿರುತ್ತೆ—ಸದರೀ ಯಾವ ದರಖಾಸ್ತನ್ನಾಗಲಿ ಯಾ ತಮ್ಮಾ ದರಖಾಸ್ತುಗಳನ್ನಾಗಲಿ ಯಾವ ಸಬಬೂ ತಿಳಿಸದೇಯೇ ತಿರಸ್ಕರಿಸುವ ಪೂರಾ ಸ್ವಾತಂತ್ರ್ಯವನ್ನು ತಮ್ಮಲ್ಲಿಯೇ ವುಳಕೊಂಡಿರುತ್ತಾರೆ.

3. ಪ್ರತಿ ದರಖಾಸ್ತಿನ ಸಂಗಡಲೂ ನಗದಾಗಿಯಾಗಲಿ ಕರೆನ್ಸೀ ನೋಟಿನ ಮೂಲಕವಾಗಿಯಾಗಲಿ ಒಂದು ನೂರು ರೂಪಾಯಿಗಳ ಕೇವಣಿಯನ್ನು ಕಳುಹಿಸತಕ್ಕದ್ದು. ತಿರಸ್ಕರಿಸಲ್ಪಡುವ ದರಖಾಸ್ತುದಾರರಿಂದ ಹಾಜರ್ಮಾಡಲ್ಪಟ್ಟ ಕೇವಣಿಗಳು ಆಯಾ ಜನಗಳಿಗೆ ಕ್ರಮವಾಗಿ ವಾಪಸು ಮಾಡಲ್ಪಡುವವು.

4. ಯಾವ ದರಖಾಸ್ತು ಫಾರೆಸ್ಟು ವ ಪ್ಲಾಂಟೇಷ್ಣಗಳ ಇನ್‌ಸ್ಪೆಕ್ಟರ್ ಜನರಲ್‌ಯವರಿಂದ ಆಕ್ಷೇರಾಗಿ ಮಂಜೂರ್ಮಾಡಲ್ಪಡುತ್ತದೆಯೋ ಅಂಥಾ ದರಖಾಸ್ತುದಾರನು ತನ್ನ ದರಖಾಸ್ತು ಮಂಜೂರ್ಮಾಡಲ್ಪಟ್ಟ ಸಂಗತಿ ಅವನಿಗೆ ತಿಳಿಸಲ್ಪಟ್ಟ 15 ದಿವಸಗಳೊಳಗಾಗಿ ನಗದಾಗಿಯಾದರೂ ಅಥವಾ ಕರೆನ್ಸೀ ನೋಟುಗಳ ಮೂಲಕವಾಗಿಯಾದರೂ ತಾನು ಮೊದಲೇ ಹಾಜರ್ಮಾಡಿರುವ ಡಿಪಾಜಿಟ್ ಮೊಬಲಗು ದೇಬೀಲ್ ಗುತ್ತಿಗೇ ಮೊಬಲಗಿನ, ಹತ್ತರಲ್ಲಿ ಒಂದು ಭಾಗಕ್ಕೆ ಸಮನಾಗುವಂತೆ ಕೇವಣೀ ಮೊಬಲಗನ್ನು ಡೆಪ್ಯುಟಿ ಕಮ್ಮಿಷನರವರಲ್ಲಿ ಹಾಜರ್ಮಾಡಿ ತಕ್ಕ ಪಾವಾಕಾಗದದಲ್ಲಿ ಮುಂದೆ ವುದಹರಿಸಲ್ಪಟ್ಟ ಷರತ್ತುಗಳಿಗೆ ಳಪಟ್ಟು ಒಪ್ಪಂದನಾಮೆ ಕರಾರು ಬರದು ಕೊಡತಕ್ಕದ್ದು.